**Akashvani : Bangalore**
**Regional Bulletin In Kannada**
**13.12.2024 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**13.12.2024 / 14.30 hrs**

**<><*<><>*><>**

ಮುಖ್ಯಾಂಶಗಳು

**೧. ರಾಜ್ಯದಲ್ಲಿ ಹೊಸದಾಗಿ ೩ ಸಾವಿರದ ೯೮೮ ಅಂಗನವಾಡಿ ತೆರೆಯಲು ಕೇಂದ್ರಕ್ಕೆ ಪ್ರಸ್ತಾವನೆ - ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್**

**೨. ರಾಜ್ಯದಲ್ಲಿನ ೫೦ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿಗಳನ್ನು ಪುರಸಭೆಯಾಗಿ ಮೇಲ್ದರ್ಜೇಗೇರಿಸಲು ಸರ್ಕಾರ ಚಿಂತನೆ**

**೩. ಕಾನೂನಿನ ಮುಂದೆ ಎಲ್ಲರೂ ಸಮಾನರು - ಮುಖ್ಯಮಂತ್ರಿ ಸಿದ್ದರಾಮಯ್ಯ**

**೪. ಚಿಕ್ಕಮಗಳೂರಿನಲ್ಲಿ ದತ್ತ ಜಯಂತಿ ಅಂಗವಾಗಿ ಶೋಭಾ ಯಾತ್ರೆ; ಜಿಲ್ಲೆಯಾದ್ಯಂತ ಬಿಗಿ ಭದ್ರತೆ**

**<><*<><>*><>**

ಸದನದಲ್ಲಿ ಹೆಚ್ಚು ಸಮಯ ಇದ್ದವರು ಉತ್ತಮ ರಾಜಕಾರಣಿಯಾಗಲು ಸಹಕಾರಿಯಾಗಲಿದೆ ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ವಿಧಾನಸಭೆಯಲ್ಲಿಂದು ತಿಳಿಸಿದ್ದಾರೆ. ಇಂದು ಬೆಳಗ್ಗೆ ಸದನ ಸಮಾವೇಶಗೊಂಡಾಗ ನಿನ್ನೆ ಸಕಾಲಕ್ಕೆ ಆಗಮಿಸಿದ ಶಾಸಕರು ಹಾಗೂ ರಾತ್ರಿ ೧೦ ಗಂಟೆವರೆಗೂ ಸದನದಲ್ಲಿ ಹಾಜರಿದ್ದ ಶಾಸಕರ,ಸಚಿವರ ಹೆಸರುಗಳನ್ನು ಸಭಾಧ್ಯಕ್ಷರು ವಾಚಿಸಿದರು. ಸದನದಲ್ಲಿ ಗಮನಸೆಳೆಯುವ ಸೂಚನೆ ಮುಗಿದ ಕೂಡಲೇ ಶಾಸಕರು ಹೊರಹೋಗುವುದು ಸರಿಯಲ್ಲ. ಸದನದಲ್ಲಿ ಹೆಚ್ಚು ಕಾಲ ಇದ್ದು ಕಾರ್ಯ ಕಲಾಪಗಳಲ್ಲಿ ಭಾಗಿಯಾದರೆ ಅನುಭವವೂ ಹೆಚ್ಚಾಗಲಿದೆ ಹಾಗೂ ದೊಡ್ಡ ಸ್ಥಾನವೂ ಸಿಗಲಿದೆ ಎಂದರು. ವೈದ್ಯರಿಗೆ ಮೆಡಿಕಲ್ ಕಾಲೇಜು, ವಕೀಲರಿಗೆ ಕಾನೂನು ಕಾಲೇಜುಗಳಿವೆ. ವೃತ್ತಿಪರರಿಗೆ ಆಯಾ ಸಂಸ್ಥೆಗಳಲ್ಲಿ ಸೂಕ್ತ ತರಬೇತಿ ಸಿಗುತ್ತಿದೆ. ಆದರೆ ರಾಜಕಾರಣಿಗಳಿಗೆ ತರಬೇತಿ ನೀಡುವ ಸಂಸ್ಥೆಗಳಿಲ್ಲ. ಹೀಗಾಗಿ ಸದನವೇ ಒಂದು ಅಕಾಡೆಮಿ ಇದ್ದಂತೆ. ಇಲ್ಲಿ ಹೆಚ್ಚು ಕಾಲ ಕಲಾಪಗಳಲ್ಲಿ ಭಾಗಿಯಾದರೆ, ಹಿರಿಯರು ಹೇಳಿದ ಮಾತುಗಳನ್ನು ಕೇಳಿದರೆ ಉತ್ತಮ ರಾಜಕಾರಣಿಯಾಗಬಹುದು ಎಂದು ಕಿವಿಮಾತು ಹೇಳಿದ್ದಾರೆ. ಈ ನಡುವೆ, ವಿಧಾನಸಭೆಯ ಆಡಳಿತ ಪಕ್ಷದ ಮೊದಲ ಸಾಲಿನಲ್ಲಿ ಸಚಿವರೇ ಇಲ್ಲ ಎಂದು ಬಿಜೆಪಿ ಶಾಸಕ ವಿ.ಸುನೀಲ್‌ಕುಮಾರ್ ಆಕ್ಷೇಪ ವ್ಯಕ್ತಪಡಿಸಿದರು.

**<><*<><>*><>**

ರಾಜ್ಯದಲ್ಲಿ ೫೦ ಗ್ರಾಮಪಂಚಾಯ್ತಿಗಳನ್ನು ಹಾಗೂ ಪಟ್ಟಣ ಪಂಚಾಯ್ತಿಗಳನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಇದೆ. ಹಂತ ಹಂತವಾಗಿ ಮೇಲ್ದರ್ಜೆಗೇರಿಸಲಾಗುವುದು ಎಂದು ನಗರಾಭಿವೃದ್ಧಿ ಸಚಿವ ಬಿ.ಎಸ್.ಸುರೇಶ್ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಶಾಸಕ ದಿನಕರ್ ಕೇಶವ ಶೆಟ್ಟಿ ಅವರ ಪ್ರಶ್ನೆಗೆ ಪೌರಾಡಳಿತ ಸಚಿವ ರಹೀಮ್ ಖಾನ್ ಉತ್ತರ ನೀಡುತ್ತಿದ್ದ ಸಂದರ್ಭದಲ್ಲಿ ಮಧ್ಯಪ್ರವೇಶಿಸಿದ ಅವರು ೨೦೧೧ರ ಜನಗಣತಿ ಪ್ರಕಾರ ಮೇಲ್ದರ್ಜೆಗೇರಿಸಲು ಅವಕಾಶವಿಲ್ಲ ಎಂದು ಹೇಳಿದರು.

ಉತ್ತರ ಕನ್ನಡ ಜಿಲ್ಲೆಯ ಗೋಕರ್ಣ ಗ್ರಾಮ ಪಂಚಾಯ್ತಿಯನ್ನು ಪಟ್ಟಣ ಪಂಚಾಯ್ತಿಯನ್ನಾಗಿ ಮೊದಲ ಆದ್ಯತೆಯಲ್ಲೇ ಮೇಲ್ದರ್ಜೆಗೇರಿಸಲು ಗಮನ ವಹಿಸಲಾಗುವುದು ಎಂದು ಪೌರಾಡಳಿತ ಸಚಿವ ರಹೀಂ ಖಾನ್

ತಿಳಿಸಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಬಿಜೆಪಿ ಶಾಸಕ ಬಿ.ವೈ. ವಿಜಯೇಂದ್ರ, ಜನಗಣತಿ ಮಾನದಂಡವೆಂದು ಪರಿಗಣಿಸಿದರೆ ಗೋಕರ್ಣವನ್ನು ಮೇಲ್ದರ್ಜೆಗೇರಿಸಲು ಸಾಧ್ಯವಿಲ್ಲ. ಲಕ್ಷಾಂತರ ಜನರು ಇಲ್ಲಿಗೆ ಬರುತ್ತಾರೆ. ಆದ್ಯತೆ ಮೇಲೆ ಪರಿಗಣಿಸಿ ಎಂದರು.

**<><*<><>*><>**

ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ೧೪೪.೭೫ ಕೋಟಿ ರೂಪಾಯಿ ಮೊತ್ತದಲ್ಲಿ ಶೀತಲಗೃಹ ಮತ್ತು ಇನ್ನಿತರ ಮೂಲಸೌಕರ್ಯ ಕಾರ್ಯಗಳನ್ನು ಕೈಗೊಳ್ಳಲು ಆರ್ಥಿಕ ಇಲಾಖೆ ಅನುಮೋದನೆ ನೀಡಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಎಸ್.ಪಾಟೀಲ್ ವಿಧಾನಸಭೆಗೆ ತಿಳಿಸಿದ್ದಾರೆ. ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಅರಸೀಕೆರೆ ಅಬ್ಬನಘಟ್ಟ ಕಾವಲ್, ಉಪಮಾರುಕಟ್ಟೆ ಪ್ರಾಂಗಣದಲ್ಲಿ ೫ ಕೋಟಿ ವೆಚ್ಚದಲ್ಲಿ ಶೀತಲಗೃಹ ಸ್ಥಾಪಿಸಲು ಅನುಮೋದನೆ ದೊರೆತ ಕೂಡಲೆ ಶೀತಲಗೃಹ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು. ನಬಾರ್ಡ್‌ನಿಂದ ಹೆಚ್ಚುವರಿ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಅಲ್ಲದೆ ತೋಟಗಾರಿಕೆ ಇಲಾಖೆ, ಕೆಫೆಟ್‌ನಲ್ಲೂ ಶೀತಲಗೃಹ ನಿರ್ಮಾಣಕ್ಕೆ ಅನುದಾನ ಪಡೆಯಬಹುದಾಗಿದ್ದು, ಅರಸೀಕೆರೆಯಲ್ಲಿ ಶೀತಲಗೃಹ ನಿರ್ಮಾಣಕ್ಕೆ ಪ್ರಯತ್ನಿಸಲಾಗುವುದು ಎಂದು ಹೇಳಿದರು.

**<><*<><>*><>**

ಪಂಚಮಸಾಲಿ ಸಮುದಾಯದವರು ಪ್ರವರ್ಗ ೨ಎ ಅಡಿಯಲ್ಲಿ ಮೀಸಲಾತಿ ಕಲ್ಪಿಸುವಂತೆ ಕೇಳುವುದಕ್ಕೆ ಹಾಗೂ ಚಳವಳಿ ಮಾಡುವುದಕ್ಕೆ ತಕರಾರಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿಜಯಪುರದಲ್ಲಿ ಮಾತನಾಡಿದ ಅವರು ಕಾನೂನನ್ನು ಯಾರೂ ಕೈಗೆ ತೆಗೆದುಕೊಳ್ಳಬಾರದು ಎಂದು ಮನವಿ ಮಾಡಿದ್ದಾರೆ. ಮುಖ್ಯಮಂತ್ರಿಗಳು ಹೃದಯಹೀನರು ಎಂಬ ಜಯಮೃತ್ಯುಂಜಯ ಸ್ವಾಮೀಜಿ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿ ಈ ಬಗ್ಗೆ ಜನರು ತೀರ್ಮಾನ ಮಾಡಲಿದ್ದಾರೆ ಎಂದು ಹೇಳಿದ್ದಾರೆ. ಕಾನೂನಿನ ಮುಂದೆ ಎಲ್ಲರೂ ಸಮಾನರು ಎಂದು ತಿಳಿಸಿದ್ದಾರೆ.

*******ಧ್ವನಿ**** ಮುಖ್ಯಮಂತ್ರಿ**

**<><*<><>*><>**

ಕಾಂಗ್ರೆಸ್ ಯಾವುದೇ ಸಮಾಜದ ವಿರೋಧಿ ಅಲ್ಲ ಎಂದು ಗೃಹ ಸಚಿವ ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್‌ನಲ್ಲೂ ಲಿಂಗಾಯತರು, ಒಕ್ಕಲಿಗರು ಗೆದ್ದಿದ್ದಾರೆ. ಬಿಜೆಪಿ ಆರೋಪ ಸತ್ಯಕ್ಕೆ ದೂರ ಎಂದು ಹೇಳಿದ್ದಾರೆ. ಜನಸಂಖ್ಯೆ ಗಣತಿ ಬಳಿಕ ಮಹಿಳಾ ಮೀಸಲಾತಿ ಆಗಬೇಕು. ಬಳಿಕ ಒಂದು ದೇಶ ಒಂದು ಚುನಾವಣೆ ನಡೆಯಬೇಕು ಎಂದು ಪರಮೇಶ್ವರ್ ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

ಚಿಕ್ಕಮಗಳೂರು ಜಿಲ್ಲೆಯಲ್ಲಿ ದತ್ತ ಜಯಂತಿ ಅಂಗವಾಗಿ ಇಂದು ಶೋಭಾಯಾತ್ರೆ ಹಮ್ಮಿಕೊಳ್ಳಲಾಗಿದ್ದು ಸುಮಾರು ೧೫ ಸಾವಿರ ಜನರು ಪಾಲ್ಗೊಳ್ಳುವ ನಿರೀಕ್ಷೆ ಇದೆ. ಮುಂಜಾಗ್ರತ ಕ್ರಮವಾಗಿ ನಗರದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದ್ದು ಸೂಕ್ಷ್ಮ ಪ್ರದೇಶಗಳಲ್ಲಿ ವೀಡಿಯೋ ಚಿತ್ರೀಕರಣ ಮಾಡಲಾಗುತ್ತಿದೆ. ಹಲವೆಡೆ ಅಂಗಡಿ ಮುಂಗಟ್ಟುಗಳನ್ನು ಮುಚ್ಚಲು ಆದೇಶಿಸಲಾಗಿದೆ. ದತ್ತಜಯಂತಿ ಅಂಗವಾಗಿ ಇಂದು ಬಿ.ಜೆ.ಪಿ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಹಾಗೂ ಇತರೇ ಮುಖಂಡರು ನಗರದ ಹಲವೆಡೆ ಕಾಲ್ನಡಿಗೆಯಲ್ಲಿ ಸಂಚರಿಸಿ ಪಡಿ ಸಂಗ್ರಹ ಸಂಗ್ರಹಿಸಿದ್ದಾರೆ.

**<><*<><>*><>**

ಸ್ಮಾರ್ಟ್ ಇಂಡಿಯಾ ಹ್ಯಾಕಥಾನ್ ೨೦೨೪ ಸಾಫ್ಟ್‌ವೇರ್ ಆವೃತ್ತಿಯ ಗ್ರ್ಯಾಂಡ್ ಫಿನಾಲೆ ಸ್ಪರ್ಧೆಯ ಫಲಿತಾಂಶ ಪ್ರಕಟಗೊಂಡಿದೆ. ಮೈಸೂರಿನ ವಿದ್ಯಾವರ್ಧಕ ಕಾಲೇಜ್ ಆಫ್ ಎಂಜಿನಿಯರಿಂಗ್‌ನಲ್ಲಿ ಕಾರ್ಯಕ್ರಮದಲ್ಲಿ ವಿವಿಧ ರಾಜ್ಯಗಳ ೨೪ ತಂಡಗಳ ಸುಮಾರು ೨೦೦ ಮಂದಿ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕೇಂದ್ರ ಸರ್ಕಾರದ ಹ್ಯಾಕಥಾನ್ ಸ್ಪರ್ಧೆ ಕುರಿತಂತೆ ವಿವಿಧ ಕಾಲೇಜುಗಳ ಉಪನ್ಯಾಸಕರು ಸಂತಸ ವ್ಯಕ್ತಪಡಿಸಿದ್ದಾರೆ.

******ಧ್ವನಿ*** ರಮ್ಯಾ(ಪ್ರೊಫೆಸರ್)**

******ಧ್ವನಿ**** ಸದಾಶಿವ ಗೌಡ**

ಸ್ಪರ್ಧೆಯಲ್ಲಿ ಭಾಗವಹಿಸಿದ್ದ ೨೪ ತಂಡಗಳ ಪೈಕಿ ಚೆನ್ನೈನ ಏಅಉ ಕಾಲೇಜ್ ಆಫ್ ಟೆಕ್ನಾಲಜಿಯ P◌೦ಅ_◌ಃಔಖಿ ತಂಡವು ಆಟೋಡೆಸ್ಕ್ ಮೂಲಕ ಸ್ವಾಯತ್ತ ನೀರಿನ ಮೇಲ್ಮೈ ಸ್ವಚ್ಛಗೊಳಿಸುವ ರೋಬೋಟ್‌ನಲ್ಲಿ ಸಮಸ್ಯೆಯನ್ನು ಪರಿಹರಿಸಿದೆ. ಬೆಂಗಳೂರಿನ ಎಂ ಎಸ್ ರಾಮಯ್ಯ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಅವಿಷ್ಕಾರಿ ನೆಕ್ಸಸ್ ತಂಡವು ಎಐಸಿಟಿಇಯಿಂದ ಬಾಹ್ಯಾಕಾಶ ಪರಿಶೋಧನೆಯ ಸಮಸ್ಯೆಯನ್ನು ಪರಿಹರಿಸಿದೆ.

**<><*<><>*><>**

ಹೈದರಾಬಾದ್ ಚಿತ್ರಮಂದಿರದ ಬಳಿ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ತೆಲುಗು ನಟ ಅಲ್ಲು ಅರ್ಜುನ್ ಅವರನ್ನು ಬಂಧಿಸಲಾಗಿದೆ. ಜಾಮೀನುರಹಿತ ವಾರೆಂಟ್ ಜಾರಿಯಾದ ಹಿನ್ನೆಲೆಯಲ್ಲಿ ಚಿಕ್ಕಡಪಲ್ಲಿ ಪೊಲೀಸರು ಅವರ ನಿವಾಸಕ್ಕೆ ತೆರಳಿ ಬಂಧಿಸಿದ್ದಾರೆ. ಸಂಧ್ಯಾ ಚಿತ್ರಮಂದಿರದ ಬಳಿ ಕಾಲ್ತುಳಿತ ಸಂಭವಿಸಿ, ಓರ್ವ ಮಹಿಳೆ ಸಾವನ್ನಪ್ಪಿದ್ದರು.

**<><*<><>*><>**

ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ಮಂಡ್ಯದಲ್ಲಿ ಇದೇ ೨೦ ರಿಂದ ಮೂರು ದಿನಗಳ ಕಾಲ ನಡೆಯಲಿದ್ದು, ಸಮ್ಮೇಳನದಲ್ಲಿ ಮಂಡ್ಯ ಜಿಲ್ಲೆಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ಬಿ.ಸಿ.ಶಿವಾನಂದಮೂರ್ತಿ ಮನವಿ ಮಾಡಿದ್ದಾರೆ. ಸಮ್ಮೇಳನವನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಿಂದ ಸಾರ್ವಜನಿಕರನ್ನು ಕರೆತರುವ ಜವಾಬ್ದಾರಿಯನ್ನು ಆಯಾ ಪಿಡಿಓಗಳಿಗೆ ವಹಿಸಲಾಗಿದೆ. ಸಾರ್ವಜನಿಕರು ಸಾಹಿತ್ಯ ಸಮ್ಮೇಳನಕ್ಕೆ ಆಗಮಿಸುವ ಉದ್ದೇಶದಿಂದ ಪ್ರತಿ ಗ್ರಾಮ ಪಂಚಾಯಿತಿಗೆ ೧ ಬಸ್ ಕಳುಹಿಸಲು ನಿರ್ಧರಿಸಲಾಗಿದೆ.

**<><*<><>*><>**

**ಸಂಕ್ಷಿಪ್ತ ಸುದ್ದಿ...**

೧. ದಾವಣಗೆರೆ, ಚಿತ್ರದುರ್ಗ, ಹಾವೇರಿ, ವಿಜಯನಗರ, ಶಿವಮೊಗ್ಗ ಸೇರಿದಂತೆ ಮಧ್ಯ ಕರ್ನಾಟಕ ಭಾಗದ ರೈತರನ್ನು ಗಮನದಲ್ಲಿ ಇಟ್ಟುಕೊಂಡು ದಾವಣಗೆರೆಯಲ್ಲಿ ಮೆಕ್ಕೇಜೋಳ ಸಂಶೋಧನಾ ಘಟಕ ಸ್ಥಾಪಿಸಬೇಕೆಂದು ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಕೇಂದ್ರ ಕೃಷಿ ಮತ್ತು ಕಿಸಾನ್ ಕಲ್ಯಾಣ ರಾಜ್ಯ ಖಾತೆ ಸಚಿವ ಭಾಗೀರಥ್ ಚೌಧರಿ ಅವರಿಗೆ ಮನವಿ ಮಾಡಿದ್ದಾರೆ.

೨. ದಾವಣಗೆರೆ ನಗರದಲ್ಲಿ ವಾಹನ ದಟ್ಟಣೆ ಮತ್ತು ಸುಗಮ ಸಂಚಾರ ವ್ಯವಸ್ಥೆ ರೂಪಿಸುವ ಸಲುವಾಗಿ ತರಕಾರಿ ಮಾರುಕಟ್ಟೆಯನ್ನು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣಕ್ಕೆ ಇದೇ ಡಿಸೆಂಬರ್ ೨೨ ರೊಳಗೆ ಸ್ಥಳಾಂತರ ಮಾಡಬೇಕೆಂದು ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಸೂಚಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>